**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ. ನರಸೀಪುರ**
**ಸಿ ಸಿ ಸಂಖ್ಯೆ: 274/2025**

**ಆಪಾದನೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಸಿದ್ದಯ್ಯ ಸಿ ಬಿನ್ ಚಿಕ್ಕಮಾದಯ್ಯ
47 ವರ್ಷ, ಕೆ ಎಸ್ ಆರ್ ಟಿ ಸಿ ಬಸ್ ಚಾಲಕ,
ವಾಸಃ ಸಿಂಗನಲ್ಲೂರು ಗ್ರಾಮ,
ಚಾಮರಾಜನಗರ ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಏನೆಂದರೆ–

ದಿನಾಂಕ 14.01.2025 ರಂದು ಸಂಜೆ 5.00 ಗಂಟೆ ಸಮಯದಲ್ಲಿ ತಿ. ನರಸೀಪುರ ಪೊಲೀಸ್ ಠಾಣಾ ಸರಹದ್ದಿನ, ತಿ. ನರಸೀಪುರ ತಾಲ್ಲೂಕಿನ ಮೂಗೂರು ಗ್ರಾಮದ ಬಸ್ ನಿಲ್ದಾಣದ ಮುಂಭಾಗ ತಿ. ನರಸೀಪುರ - ಕೊಳ್ಳೇಗಾಲ ಮುಖ್ಯ ರಸ್ತೆಯಲ್ಲಿ ಆರೋಪಿಯಾದ ನೀವು ಕೆ ಎಸ್ ಆರ್ ಟಿ ಸಿ ಬಸ್ ಸಂಖ್ಯೆ ಕೆಎ–10–ಎಫ್–0060 ನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ, ಪ್ರಕಾಶ ರವರಿಗೆ ಢಿಕ್ಕಿ ಮಾಡಿ ಅವರ ಮರಣ ಉಂಟು ಮಾಡುವ ಮೂಲಕ ಭಾರತೀಯ ನ್ಯಾಯಾ ಸಂಹಿತೆ ಕಲಂ. 281 ಮತ್ತು 106 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು.

ಪ್ರಶ್ನೆಃ ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 26.12.2025.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.

**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 249/2025**

**ಆಪಾದನೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

2. ಶಿವಕುಮಾರ್ ಬಿನ್ ಮಹದೇವಯ್ಯ
35 ವರ್ಷ, ವಾಸಃ ಅಂಬೇಡ್ಕರ್ ರಸ್ತೆ,
ಗಾಣಗೂರು ಗ್ರಾಮ, ಚಾಮರಾಜನಗರ ಜಿಲ್ಲೆ.

ಎಂಬ 2ನೇ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಏನೆಂದರೆ–

ದಿನಾಂಕ 26.10.2023 ರಂದು ರಾತ್ರಿ 8.45ಗಂಟೆ ಸಮಯದಲ್ಲಿ ತಿ. ನರಸೀಪುರ ಪೊಲೀಸ್ ಠಾಣಾ ಸರಹದ್ದಿನ, ತಿ. ನರಸೀಪುರ ತಾಲ್ಲೂಕಿನ ಬನ್ನಹಳ್ಳಿ ಹುಂಡಿ ಮತ್ತು ಆಲಸ್ತಿಕಟ್ಟೆ ಹುಂಡಿ ಗ್ರಾಮಗಳ ನಡುವೆ ಇರುವ ಪೆಟ್ರೋಲ್ ಬಂಕ್ ಹತ್ತಿರ ತಿ. ನರಸೀಪುರ – ನಂಜನಗೂಡು ಮುಖ್ಯ ರಸ್ತೆಯ ಬಳಿ ನಡೆದ ಅಪಘಾತದಲ್ಲಿ, ಅಪಘಾತ ಪಡಿಸಿದ ಮೋಟಾರ್ ಸೈಕಲ್ ಸಂಖ್ಯೆ ಕೆಎ–10–ಯು–5091ರ ಮಾಲೀಕ 2ನೇ ಆರೋಪಿತರಾದ ನೀವು ಆಗಿದ್ದು, ಅದನ್ನು ಚಾಲನ ಪರವಾನಗಿ ಇಲ್ಲದೆ ಇರುವ 1ನೇ ಆರೋಪಿಗೆ ಚಾಲನೆ ಮಾಡಲು ನೀಡುವ ಮೂಲಕ ಭಾರತೀಯ ಮೋಟಾರು ವಾಹನ ಕಾಯ್ದೆ ಕಲಂ 180 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು.

ಪ್ರಶ್ನೆಃ ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ತಪ್ಪೊಪ್ಪಿಕೊಳ್ಳುವೆ.

(ಮೇಲಿನ ಆಪಾದನೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 06.12.2025.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.